# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತಾರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಸೋಮವಾರ, ದಿನಾಂಕ:28ನೇ ಮಾರ್ಚ್, 2022**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

***

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೈದನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:**

| | |
|---|---|
| 15ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಆಯನೂರು ಮಂಜುನಾಥ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 216 (1781) | ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೈದನೆಯ ಪಟ್ಟಿ

## 02. ವರದಿಯನ್ನೊಪ್ಪಿಸುವುದು

**ಶ್ರೀ ಬಿ.ಎಂ.ಫಾರೂಖ್, (ಅಧ್ಯಕ್ಷರು, ಸರ್ಕಾರಿ ಭರವಸೆಗಳ ಸಮಿತಿ)** ಅವರು ಕರ್ನಾಟಕ ವಿಧಾನ ಪರಿಷತ್ತಿನ ಸರ್ಕಾರಿ ಭರವಸೆಗಳ ಸಮಿತಿಯ 48ನೇ ವರದಿಯನ್ನು ಒಪ್ಪಿಸುವುದು.

## ೦3. ಸಭೆಯ ಮುಂದಿಡಲಾಗುವ ಕಾಗದ ಪತ್ರ

**ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕವನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು.**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2022

## 04. ಶಾಸನ ರಚನೆ

**ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2022

**ಶ್ರೀ ಕೆ.ಎಸ್. ಈಶ್ವರಪ್ಪ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

... 2/

## 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಸಲೀಂ ಅಹಮದ್** ಅವರು ಕರ್ನಾಟಕದ ಜೀವ ನದಿಗಳಲ್ಲಿ ಒಂದಾಗಿರುವ ಮಹಾದಾಯಿ, ಕಳಸಾ–ಬಂಡೂರಿ ನಾಲಾ ಜೋಡಣೆ ಕಾಮಗಾರಿ ಯೋಜನೆ ವಿಳಂಬವಾಗುತ್ತಿರುವ ಕುರಿತು ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

02. **ಶ್ರೀ ಎಸ್. ರುದ್ರೇಗೌಡ** ಅವರು ಕರ್ನಾಟಕ ಲೋಕಸೇವಾ ಆಯೋಗದಿಂದ ನಡೆಯುವ ನೇಮಕಾತಿ ಪ್ರಕ್ರಿಯೆಯಲ್ಲಿ ವ್ಯಕ್ತಿತ್ವ ಪರೀಕ್ಷೆಯ ಅಂಕಗಳನ್ನು ಕಡಿತಗೊಳಿಸಿರುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

03. **ಶ್ರೀಯುತರುಗಳಾದ ಪಿ.ಆರ್. ರಮೇಶ್, ಮರಿತಿಬ್ಬೇಗೌಡ, ಹಾಗೂ ಮೋಹನ್ ಕುಮಾರ್ ಕೊಂಡಜ್ಜಿ** ಅವರುಗಳು ಬೆಂಗಳೂರು ದೇವರಚಿಕ್ಕನಹಳ್ಳಿಯ ವಾರ್ಡ್ ನಂ.188ರಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಇಂಡಿಯನ್ ಆಯಿಲ್ ಕಾರ್ಪೋರೇಷನ್‌ಗೆ ಹಂಚಿಕೆಯಾಗಿದ್ದ ಸಿ.ಎ. ನಿವೇಶನವನ್ನು ಭೂಗಳ್ಳರು ಅತಿಕ್ರಮಿಸಿರುವ ಕುರಿತು ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

04. **ಶ್ರೀ ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು** ಅವರು ವಿಜಯಪುರ ಜಿಲ್ಲೆಯಲ್ಲಿ ನೀರಿನ ಅಭಾವವು ಹೆಚ್ಚಾಗಿದ್ದು ಕೃಷ್ಣಾ ನದಿಯಿಂದ ನೀರು ಸರಬರಾಜು ಮಾಡುವ ಮುಖಾಂತರ ಜನರ ಕುಡಿಯುವ ನೀರಿನ ಬವಣೆಯನ್ನು ನಿವಾರಿಸುವ ಕುರಿತು ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು

05. **ಶ್ರೀ ಯು.ಬಿ.ವೆಂಕಟೇಶ್** ಅವರು ಬೆಂಗಳೂರು ನಗರದ ಕತ್ರಿಗುಪ್ಪೆ ಗ್ರಾಮದ ಸರ್ವೆ ನಂ.15ರಲ್ಲಿ ಹೈಕೋರ್ಟ್ ಆದೇಶವಿದ್ದರೂ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಸಾರ್ವಜನಿಕರ ಉಪಯೋಗಕ್ಕಾಗಿ ಮೀಸಲಿಟ್ಟಿರುವ ನಿವೇಶನಗಳನ್ನು ವಶಕ್ಕೆ ಪಡೆಯದಿರುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

01. **ಶ್ರೀಯುತರುಗಳಾದ ಎನ್.ರವಿಕುಮಾರ್, ಯು.ಬಿ.ವೆಂಕಟೇಶ್, ದಿನೇಶ್ ಗೂಳಿಗೌಡ ಹಾಗೂ ಡಿ.ಎಸ್. ಅರುಣ್** ಅವರುಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಲ್ಲಿ ನಡೆಯುತ್ತಿರುವ ಅಕ್ರಮಗಳ ಕುರಿತು ಪ್ರಸ್ತಾಪಿಸುವುದು.

02. **ಶ್ರೀಯುತರುಗಳಾದ ಕೆ.ಎ. ತಿಪ್ಪೇಸ್ವಾಮಿ, ಕೆ.ಟಿ. ಶ್ರೀಕಂಠೇಗೌಡ, ಗೋವಿಂದರಾಜು, ಎಸ್.ಎಲ್. ಭೋಜೇಗೌಡ ಹಾಗೂ ಸೂರಜ್ ರೇವಣ್ಣ** ಅವರುಗಳು ಕರ್ನಾಟಕ ನಾಗರೀಕ ಸೇವಾ ನಿಯಮ 2021ಕ್ಕೆ ತಿದ್ದುಪಡಿ ತರಲು ಸರ್ಕಾರವು ಕರ್ನಾಟಕ ಲೋಕಸೇವಾ ಆಯೋಗದೊಂದಿಗೆ ಸಮಾಲೋಚಿಸದೇ ಕರಡು ಅಧಿಸೂಚನೆಯನ್ನು ಹೊರಡಿಸಿರುವುದರ ಕುರಿತು ಪ್ರಸ್ತಾಪಿಸುವುದು.

03. **ಶ್ರೀಯುತರುಗಳಾದ ಹೆಚ್.ಎಂ. ರಮೇಶ್‌ಗೌಡ, ನಸೀರ್ ಅಹ್ಮದ್, ಎನ್. ರವಿಕುಮಾರ್, ಎಂ.ಎಲ್. ಅನಿಲ್ ಕುಮಾರ್, ಹೆಚ್.ಎಸ್. ಗೋಪಿನಾಥ್** ಹಾಗೂ ಇತರರು ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ತಾಲ್ಲೂಕು, ಕುಂದಾಣ ಹೋಬಳಿಯಲ್ಲಿನ ಸರ್ಕಾರಿ ಗೋಮಾಳ ಸ್ವತ್ತನ್ನು ಸುಳ್ಳು ದಾಖಲಾತಿ ಸೃಷ್ಟಿಸಿ ಅಕ್ರಮವಾಗಿ ಖಾತೆ ವರ್ಗಾಯಿಸಿಕೊಂಡಿರುವ ಕುರಿತು ಪ್ರಸ್ತಾಪಿಸುವುದು.

04. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ನಸೀರ್ ಅಹ್ಮದ್, ಪಿ.ಆರ್. ರಮೇಶ್, ಎಸ್. ರವಿ, ಸಲೀಂ ಅಹಮದ್** ಹಾಗೂ ಇತರರು ಬೆಂಗಳೂರಿನ ಟರ್ಫ್ ಕ್ಲಬ್ ಸಂಸ್ಥೆಯು ಸರ್ಕಾರಕ್ಕೆ ಪಾವತಿಸಬೇಕಾಗಿರುವ ತೆರಿಗೆ ಹಾಗೂ ಬಾಡಿಗೆ ಮೊತ್ತವನ್ನು ಬಾಕಿ ಉಳಿಸಿಕೊಂಡಿರುವುದರಿಂದ ಸದರಿ ಕ್ಲಬ್‌ನ ಪರವಾನಗಿಯನ್ನು ರದ್ದುಪಡಿಸುವ ಕುರಿತು ಪ್ರಸ್ತಾಪಿಸುವುದು.

೦೫. **ಶ್ರೀಯುತರುಗಳಾದ ಮಂಜುನಾಥ್ ಭಂಡಾರಿ, ಬಿ.ಕೆ. ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು, ಡಾ. ಕೆ.ಗೋವಿಂದರಾಜು ಎಸ್.ಎಲ್.ಭೋಜೇಗೌಡ, ಪ್ರತಾಪ್ ಸಿಂಹ ನಾಯಕ್ ಹಾಗೂ** ಇತರರು ರಾಜ್ಯದ ಕರಾವಳಿ ಭಾಗದಲ್ಲಿನ ಜಾನಪದ ಕ್ರೀಡೆಯಾದ ಕಂಬಳ ಕ್ಷೇತ್ರಕ್ಕೆ ಸರಿಯಾದ ಪ್ರೋತ್ಸಾಹವಿಲ್ಲದೆ ತನ್ನ ಅಸ್ತಿತ್ವವನ್ನು ಕಳೆದುಕೊಳ್ಳುತ್ತಿರುವ ಕುರಿತು ಪ್ರಸ್ತಾಪಿಸುವುದು.

೦೬. **ಶ್ರೀ ಡಿ.ಎಸ್.ಅರುಣ್** ಅವರು ಟ್ರೇಡ್ ಪರವಾನಗಿ ಶುಲ್ಕ ವಸೂಲಾತಿಯಲ್ಲಿ ಗೊಂದಲಗಳಿರುವ ಕುರಿತು ಪ್ರಸ್ತಾಪಿಸುವುದು.

೦೭. **ಶ್ರೀಯುತರುಗಳಾದ ಕೆ.ಟಿ. ಶ್ರೀಕಂಠೇಗೌಡ, ಕೆ.ಎ. ತಿಪ್ಪೇಸ್ವಾಮಿ ಹಾಗೂ ಎಸ್.ಎಲ್. ಭೋಜೇಗೌಡ** ಅವರುಗಳು ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಬಳಕೆಯಾಗದೆ ಉಳಿದಿರುವ ಅನುದಾನವನ್ನು ಹಿಂಪಡೆದಿರುವ ಕುರಿತು ಪ್ರಸ್ತಾಪಿಸುವುದು.

೦೮. **ಶ್ರೀಯುತರುಗಳಾದ ಲಕ್ಷ್ಮಣ ಸಂಗಪ್ಪ ಸವದಿ, ಡಾ. ವೈ.ಎ. ನಾರಾಯಣಸ್ವಾಮಿ, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು ಮತ್ತು ಭಾರತಿ ಶೆಟ್ಟಿ** ಅವರುಗಳು ಗಿಡ ಮೂಲಿಕೆಗಳ ಸಹಾಯದಿಂದ ದಿವ್ಯ ಔಷಧಿಗಳನ್ನು ತಯಾರಿಸಿ ಅನೇಕ ಖಾಯಿಲೆಗಳಿಗೆ ಚಿಕಿತ್ಸೆ ನೀಡುತ್ತಿರುವ ವೈದ್ಯರುಗಳಿಗೆ ಮುಕ್ತವಾಗಿ ಸೇವೆ ಸಲ್ಲಿಸಲು ಪ್ರಮಾಣ ಪತ್ರ ನೀಡುವ ಕುರಿತು ಪ್ರಸ್ತಾಪಿಸುವುದು.

## 07. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | |
|---|---|
| ಶ್ರೀ ಬಿ.ಕೆ. ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು, ಶ್ರೀ ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಶ್ರೀ ಅಲ್ಲಂ ವೀರಭದ್ರಪ್ಪ, ಶ್ರೀ ಆರ್.ಬಿ.ತಿಮ್ಮಾಪೂರ, ಶ್ರೀ ಸಲೀಂ ಅಹಮದ್, ಶ್ರೀ ಎಸ್.ರವಿ, ಶ್ರೀ ಯು.ಬಿ. ವೆಂಕಟೇಶ್ ಹಾಗೂ ಶ್ರೀಮತಿ ವೀಣಾ ಅಚ್ಚಯ್ಯ ಅವರುಗಳು | ರಾಜ್ಯದ ಕಾನೂನು ಹಾಗೂ ಸಮಾಜ ರಕ್ಷಕರಾಗಿರುವ ಕೆಲವು ಪೊಲೀಸರು ಹಣ ಸಂಪಾದನೆಗಾಗಿ ಭ್ರಷ್ಟಾಚಾರದಲ್ಲಿ ತೊಡಗಿರುವ ಕುರಿತು ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ. |

## 08. ಖಾಸಗಿ ಸದಸ್ಯರ ಕಾರ್ಯಕಲಾಪ

### ಖಾಸಗಿ ನಿರ್ಣಯ

ದೇಸೀಯ ಪರಂಪರೆಯ ಆಯುರ್ವೇದ ವೈದ್ಯ ಪದ್ಧತಿಗೆ ಮನ್ನಣೆ ದೊರಕಿಸಿಕೊಡುವ ಸಲುವಾಗಿ ನೀತಿಯೊಂದನ್ನು ರೂಪಿಸುವ ಕುರಿತು **ಶ್ರೀ ಯು.ಬಿ. ವೆಂಕಟೇಶ್** ಅವರು ಮಂಡಿಸಿರುವ ನಿರ್ಣಯದ ಮೇಲೆ ಸರ್ಕಾರದಿಂದ ಉತ್ತರ.

## 09. ಇಲಾಖಾ ನೀತಿ ಹಾಗೂ ಕಾರ್ಯಾಚರಣೆ ಮೇಲಿನ ಚರ್ಚೆ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ನೀತಿ ಹಾಗೂ ಕಾರ್ಯಚರಣೆಯ ಮೇಲಿನ ಚರ್ಚೆ

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**